146ನೇ ಅಧಿವೇಶನ
ನಿ - 330
ಕ್ರ - 2

# ಕರ್ನಾಟಕ ವಿಧಾನ ಪರಿಷತ್ತು

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಿ. ಕೆ. ಹರಿಪ್ರಸಾದ್ ಇವರು ನಿಯಮ 330 ರಡಿಯಲ್ಲಿ ನೀಡಲಾದ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಗಮನ ಸೆಳೆಯುವ ಸೂಚನೆ:-**

"ಕರ್ನಾಟಕ ರಾಜ್ಯದಲ್ಲಿ ಹೊಲಿಗೆ (ಟೈಲರ್) ವೃತ್ತಿಯಲ್ಲಿತೊಡಗಿರುವ ಕಸಬುದಾರರ ಬದುಕು ಅತ್ಯಂತ ಹೀನಾಯ ಸ್ಥಿತಿಯಲ್ಲಿದ್ದು, ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿ ಹಾಗೂ ಸಮಾಜದ ಮುಖ್ಯವಾಹಿನಿಯಿಂದ ಹಿಂದುಳಿದಿರುತ್ತಾರೆ. ಇವರ ಮೂಲ ವೃತ್ತಿ ಕೌಶಲ್ಯತೆ ಹಾಗೂ ನೈಪುಣ್ಯತೆಗಳು ಬದಲಾದ ಸಮಾಜದ ಹಿನ್ನೆಲೆಗೆ ಸರಿದುಹೋಗಿದ್ದು, ಆರ್ಥಿಕ ಸಂಕಷ್ಟದಲ್ಲಿರುತ್ತಾರೆ. ಇವರುಗಳಿಗೆ ವೃತ್ತಿ ಸ್ವಾವಲಂಬನೆ, ಸ್ವಯಂ ಉದ್ಯೋಗ, ಆರ್ಥಿಕ ಪ್ರೋತ್ಸಾಹಗಳನ್ನು ಒದಗಿಸುವ ಸಲುವಾಗಿ ತಮಿಳುನಾಡು ಮಾದರಿಯಲ್ಲಿ ರಾಜ್ಯದಲ್ಲೂ ಅಭಿವೃದ್ಧಿ ನಿಗಮವೊಂದನ್ನು ರಚಿಸುವ ಕುರಿತು ನಿಯಮ 330ರ ಅಡಿಯಲ್ಲಿ ಮಾನ್ಯ ಕಾರ್ಮಿಕ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ."

**ಉತ್ತರ:-**

ಅಸಂಘಟಿತ ಕಾರ್ಮಿಕರ ಜೀವನ ಮಟ್ಟವನ್ನು ಉತ್ತಮಪಡಿಸಿ. ಅವರಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸಲು ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆಯನ್ನು, 2008 ರಲ್ಲಿ ಜಾರಿಗೆ ತಂದಿದ್ದು, ಇದಕ್ಕೆ ಅನುಗುಣವಾಗಿ ಕರ್ನಾಟಕ ರಾಜ್ಯವು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ (ಕರ್ನಾಟಕ) ನಿಯಮಗಳು, 2009ಅನ್ನು ರಚಿಸಿರುತ್ತದೆ. ಅಲ್ಲದೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ರಚಿಸಿರುತ್ತದೆ.

ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ವಲಯದ ಇತರೆ ವರ್ಗ (ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 2(m) ಹಾಗೂ ಕಲಂ 2(l) ರ ವ್ಯಾಖ್ಯಾನಕ್ಕೆ ಒಳಪಡುವ ಅಸಂಘಟಿತ ವರ್ಗದ ಎಲ್ಲಾ ಕಾರ್ಮಿಕರು) ಸೇರಿದಂತೆ ಒಟ್ಟು 43 ಕಾರ್ಮಿಕರ ವರ್ಗಗಳನ್ನು ಗುರುತಿಸಿದ್ದು, ಅದರಲ್ಲಿ ಹೊಲಿಗೆ ವೃತ್ತಿಯಲ್ಲಿ(ಟೈಲರ್) ತೊಡಗಿರುವವರು ಸೇರಿರುತ್ತಾರೆ. ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 11 ಅಸಂಘಟಿತ ವರ್ಗಗಳ ಕಾರ್ಮಿಕರಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು. ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು. ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದ್ದು, ಅದರಲ್ಲಿ ಈವರೆಗೆ 1,09,649 ದರ್ಜಿಗಳನ್ನು (ಟೈಲರ್) ಯೋಜನೆಯಡಿ ನೋಂದಾಯಿಸಲಾಗಿದೆ.

ಕೋವಿಡ್-19ರ 2ನೇ ಅಲೆಯ ಲಾಕ್‌ಡೌನ್ ಕಾರಣದಿಂದ ಸಂಕಷ್ಟಕ್ಕೊಳಗಾದ ಮೇಲ್ಕಂಡ 11 ವರ್ಗಗಳ ಕಾರ್ಮಿಕರಿಗೆ ರೂ. 2,000/-ಗಳ ಒಂದು ಬಾರಿ ಪರಿಹಾರದ ನೆರವನ್ನು ಘೋಷಿಸಿದ್ದು, ಹೊಲಿಗೆ ವೃತ್ತಿ ನಿರ್ವಹಿಸುತ್ತಿರುವ 5,91,157 ಅರ್ಹ ಕಾರ್ಮಿಕರಿಗೆ ಒಟ್ಟು ರೂ. 118.23 ಕೋಟಿಗಳ ನೆರವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಮೂಲಕ ಪಾವತಿಸಲಾಗಿದೆ.

ಮುಂದುವರೆದು, ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಅಸಂಘಟಿತ ಕಾರ್ಮಿಕರ ದತ್ತಾಂಶವನ್ನು ಸಂಗ್ರಹಿಸುವ ಉದ್ದೇಶದಿಂದ, ಇ-ಶ್ರಮ್ ಪೋರ್ಟಲ್‌ಅನ್ನು ಅಭಿವೃದ್ಧಿಪಡಿಸಿದ್ದು, ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗುತ್ತಿದೆ. ರಾಜ್ಯದಲ್ಲಿ ಈವರೆಗೆ 4,24,819 ಹೊಲಿಗೆ ವೃತ್ತಿಗೆ ಸಂಬಂಧಿಸಿದ ಕಾರ್ಮಿಕರು ನೋಂದಣಿ ಮಾಡಿಕೊಂಡಿರುತ್ತಾರೆ.

ಆದರೆ, ಪ್ರಸ್ತುತ ಹೊಲಿಗೆ (ಟೈಲರ್) ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರಿಗೆ ಸಂಬಂಧಿಸಿದಂತೆ ಪ್ರತ್ಯೇಕ ಅಭಿವೃದ್ಧಿ ನಿಗಮ ರಚಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

**ಕಾಇ 51 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು